# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕೋರಮಂಗಲ ಉಪ-ವಿಭಾಗದ ಜಕ್ಕಸಂದ್ರ ವಾರ್ಡ್ ಸಂಖ್ಯೆ-173 ದಿನಾಂಕ:22.09.2022 ರಂದು ಸೆಪ್ಟೆಂಬರ್-2022 ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಶ್ರೀ ಶಿವಣ್ಣ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173ರ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಟ್ಟಡ, ಉದ್ಯಾನವನ ಹತ್ತಿರ, ಹೆಚ್.ಎಸ್.ಆರ್. 5ನೇ ಹಂತ, ಜಕ್ಕಸಂದ್ರ, (ಜಕ್ಕಸಂದ್ರ ವಾರ್ಡ್ ಕಛೇರಿ, ಬಿ.ಬಿ.ಎಂ.ಪಿ) ಬೆಂಗಳೂರು ದಿನಾಂಕ:22.09.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:

**ಹಾಜರಿದ್ದವರು:-**

1. ಶ್ರೀ ಎಲ್.ವಿ. ಹೆನ್ರಿ
2. ಶ್ರೀ ಎಸ್. ಕೃಷ್ಣ
3. ಶ್ರೀ ಎಂ.ಎ. ಪೊನ್ನಪ್ಪ
4. ಶ್ರೀಮತಿ ಸರಸ್ವತಮ್ಮ
5. ಶ್ರೀಮತಿ ಜ್ಯೋತಿ ಜಿ. ಪ್ರಭು
6. ಶ್ರೀಮತಿ ಪ್ರೇಮ ಮಯೂರಿ
7. ಶ್ರೀಮತಿ ಪ್ರೇಮ

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಶಿವಣ್ಣ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಮತ್ತು ನೋಡಲ್ ಅಧಿಕಾರಿಗಳು
2. ಶ್ರೀ ಪ್ರದೀಪ್ ಕುಮಾರ್, ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್-173 ಜಕ್ಕಸಂದ್ರ
3. ಶ್ರೀ ಮೊಹಮ್ಮದ್ ಶಾಬದ್ ಹೈದರ್, ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ನವೀನ್ .ಎಸ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ ಧರಣೇಶ್ ಕುಮಾರ್ .ಹೆಚ್.ಬಿ., ಮಡಿವಾಳ ಸಂಚಾರ ಪೊಲೀಸ್ ಠಾಣೆ
6. ಶ್ರೀ ಕರಿಯಪ್ಪ, ತೆರಿಗೆ ನಿರೀಕ್ಷಕರು, ಕಂದಾಯ ಇಲಾಖೆ
7. ಶ್ರೀ ಹೆಚ್.ಜಿ. ಸೋಮಶೇಖರಪ್ಪ
8. ಶ್ರೀ ನರಸಿಂಹಲು, ಬಿ.ಬಿ.ಎಂ.ಪಿ. (ಸೂಪರ್‌ವೈಸರ್)

* * * * *

ಶ್ರೀ ಶಿವಣ್ಣ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173 ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ತಿಳಿಸಿದರು.

ಶ್ರೀ ಹೆನ್ರಿ ರವರು ಮಾತನಾಡಿ, ಟೀಚರ್ಸ್ ಕಾಲೋನಿ 5ನೇ ಮುಖ್ಯರಸ್ತೆಯಲ್ಲಿರುವ ಕಲ್ವರ್ಟ್‌ಗೆ ಅಡ್ಡಲಾಗಿ ಬಂದಿರುವ ಹಳೆಯದಾದ ಶಿಥಿಲಾವಸ್ಥೆಯಲ್ಲಿರುವ ಬೆಸ್ಕಾಂ ಕಂಬವನ್ನು ಬದಲಾಯಿಸಬೇಕೆಂದು ಸಭೆಗೆ ಕೋರಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಬೆಸ್ಕಾಂ, ಎಸ್-20**



Scanned by CamScanner

ಶ್ರೀ ಹೆನ್ರಿ ರವರು ಮಾತನಾಡಿ, 5ನೇ ಮುಖ್ಯರಸ್ತೆಯಲ್ಲಿ ರಸ್ತೆ ಚರಂಡಿ ಕಾಮಗಾರಿ ಪ್ರಗತಿಯಲ್ಲಿದ್ದು, ಹಾಲಿ ಪ್ರಗತಿಯಲ್ಲಿರುವ ಕಾಮಗಾರಿಯನ್ನು ಸಂಪೂರ್ಣವಾಗಿ ಪೂರ್ಣಗೊಳಿಸಿದ ನಂತರ, ಹೊಸದಾಗಿ ಬೇರೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸಭೆಗೆ ಕೋರಿದರು. ಅದಕ್ಕೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಇಂಜಿನಿಯರ್ ಮತ್ತು ಕಾರ್ಯದರ್ಶಿ, ವಾರ್ಡ್ ಕಮಿಟಿ ರವರು ಉತ್ತರಿಸಿ, ಅಪೂರ್ಣ ಕಾಮಗಾರಿಗಳನ್ನು ಪೂರ್ಣಗೊಳಿಸಿದರ ನಂತರದಲ್ಲಿ ಹೊಸದಾಗಿ ರಸ್ತೆ ಚರಂಡಿ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ಸಭೆಗೆ ತಿಳಿಸಿದರು.

ಮುಂದುವರೆದು, 5ನೇ ಮುಖ್ಯರಸ್ತೆ, ವೆಂಕಟಾಪುರ ಮುಖ್ಯರಸ್ತೆಗಳಲ್ಲಿ ಎಡ ಮತ್ತು ಬಲ ಬದಿಗಳಲ್ಲಿ ತಳ್ಳುವ ಗಾಡಿಯ ಮೂಲಕ ಹಣ್ಣು ತರಕಾರಿ ಗಾಡಿಗಳನ್ನು ಎಲ್ಲೆಂದರಲ್ಲಿ ನಿಲ್ಲಿಸಿ, ವ್ಯಾಪಾರ ವಹಿವಾಟು ನಡೆಸುತ್ತಿದ್ದು, ಇದರಿಂದ ಸಾರ್ವಜನಿಕರ ಸಂಚಾರಕ್ಕೆ ಅನಾನುಕೂಲ ಉಂಟಾಗುತ್ತಿದ್ದು, ಸಂಬಂಧಪಟ್ಟವರು ಕ್ರಮವಹಿಸಬೇಕೆಂದು ಕೋರಿದರು.

ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೋರಮಂಗಲ ಉಪವಿಭಾಗ,
ಕ್ರಮ: ಹಿರಿಯ ಆರೋಗ್ಯ ಪರಿವೀಕ್ಷಕರು
ಜಕ್ಕಸಂದ್ರ

ಶ್ರೀ ಕೃಷ್ಣ ರವರು ಮಾತನಾಡಿ, 6ನೇ ಮುಖ್ಯರಸ್ತೆ ಮತ್ತು 4ನೇ ಅವೆನ್ಯೂ ಮತ್ತು 5ನೇ ಅವೆನ್ಯೂ ಸಂಪರ್ಕಿಸುವ ರಸ್ತೆಗಳಲ್ಲಿ ಇರುವ ಪೆಟ್ಟಿ ಅಂಗಡಿಗಳ ಬಳಿ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನವನ್ನು ಮಾಡುವುದರಿಂದ ಇತರೆ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದರಿಂದ ಇವುಗಳನ್ನು ತಡೆಗಟ್ಟಬೇಕೆಂದು ಸಭೆಯಲ್ಲಿ ಕೋರಿದರು.

ಕ್ರಮ: ಹಿರಿಯ ಆರೋಗ್ಯ ಪರಿವೀಕ್ಷಕರು
ಜಕ್ಕಸಂದ್ರ

ಶ್ರೀಮತಿ ಪ್ರೇಮಾ ರವರು ಮಾತನಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡದ ಮುಂಭಾಗವಿರುವ ಖಾಲಿ ನಿವೇಶನದಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. (ಡಬ್ಲ್ಯೂಡಬ್ಲ್ಯೂ.ಎಂ) ರವರ ವತಿಯಿಂದ 600 ಎಂ.ಎಂ. ವ್ಯಾಸದ ಆರ್.ಸಿ.ಸಿ. ಕಾಂಕ್ರೀಟ್ ಒಳಚರಂಡಿ ಕೊಳವೆಗಳನ್ನು ಬದಲಾಯಿಸುವ ಕಾಮಗಾರಿ ವೇಳೆಯಲ್ಲಿ ಉಳಿಕೆಗೊಂಡ ಕೊಳವೆಗಳನ್ನು ಖಾಲಿ ನಿವೇಶನದಲ್ಲಿ ಸುರಿದಿರುವುದನ್ನು ಖಾಲಿ ಮಾಡಬೇಕೆಂದು ಸಭೆಯಲ್ಲಿ ಕೋರಿದು.

ಕ್ರಮ: ಕಾರ್ಯಪಾಲಕ ಅಭಿಯಂತರರು
ಬಿ.ಡಬ್ಲ್ಯೂ.ಎಸ್.ಎಸ್.ಬಿ. (ಡಬ್ಲ್ಯೂಡಬ್ಲ್ಯೂ.ಎಂ)

ಶ್ರೀ ಹೆನ್ರಿ ರವರು ಮಾತನಾಡಿ, ನಮ್ಮ ಕ್ಲಿನಿಕ್‌ಗೆ ಜಕ್ಕಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಮೀಸಲಿರಿಸಿದ ಸ್ಥಳವನ್ನು ತಿಳಿಸುವಂತೆ ಕೋರಲಾಗಿ, ಇದಕ್ಕೆ ಉತ್ತರಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಪ್ರಸ್ತುತ ಮಾರಮ್ಮ ದೇವಸ್ಥಾನದ ಮುಂಭಾಗ ನಿರ್ಮಾಣ ಹಂತದಲ್ಲಿ ಇರುವ ವಿವಿಧೋದ್ದೇಶ ಕಟ್ಟಡದ ಮೊದಲನೇ ಮಹಡಿಯಲ್ಲಿ ಜಾಗವನ್ನು ಗುರುತಿಸಿದ್ದು, ಈ ಬಗ್ಗೆ ಮುಂದಿನ ಆದೇಶಕ್ಕಾಗಿ ಅಂದಾಜು ಪಟ್ಟಿಯನ್ನು ಮೇಲಾಧಿಕಾರಿಗಳಿಗೆ ಕಡತವನ್ನು ಸಲ್ಲಿಸಲಾಗಿರುತ್ತದೆ ಎಂಬುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು (ಜಕ್ಕಸಂದ್ರ) ರವರು ಸಭೆಗೆ ತಿಳಿಸಿದರು.

ಕ್ರಮ: ಹಿರಿಯ ಆರೋಗ್ಯ ಪರಿವೀಕ್ಷಕರು
ಜಕ್ಕಸಂದ್ರ



Scanned by CamScanner

ಶ್ರೀ ಪೊನ್ನಪ್ಪ ರವರು ಮಾತನಾಡಿ, 14ನೇ ಮುಖ್ಯರಸ್ತೆಯ ಚರಂಡಿ ಮತ್ತು ಇದಕ್ಕೆ ಸಂಪರ್ಕಗೊಳ್ಳುವ ಮಳೆನೀರು ಚರಂಡಿ ಮಾರ್ಗಗಳ ಬಗ್ಗೆ ಸಂಕ್ಷಿಪ್ತವಾದ ಸರ್ವೆ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.

ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಮಳೆನೀರುಗಾಲುವೆ

ಶ್ರೀ ಪೊನ್ನಪ್ಪ ರವರು ಮಾತನಾಡಿ, 6ನೇ ಅಡ್ಡರಸ್ತೆ, ವೆಂಕಟಾಪುರ ಸ್ಮಶಾನದ ಎದುರು ಇರುವ ರಸ್ತೆಯಲ್ಲಿ ಹೊಸದಾಗಿ ಡಾಂಬರೀಕರಣ ಮಾಡಲಾಗಿದ್ದು, ರಸ್ತೆಯ ಮಧ್ಯದಲ್ಲಿ ರಸ್ತೆ ವಿಭಜಕಗಳನ್ನು ಅಳವಡಿಸಲು ಸಂಬಂಧಪಟ್ಟವರಿಗೆ ಕ್ರಮವಹಿಸಲು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಸಭೆಯಲ್ಲಿ ಉತ್ತರಿಸಿದ, ಸಹಾಯಕ ಇಂಜಿನಿಯರ್ ಮತ್ತು ಕಾರ್ಯದರ್ಶಿ, ವಾರ್ಡ್ ಕಮಿಟಿ ರವರು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

ಶ್ರೀಮತಿ ಸರಸ್ವತಮ್ಮ ರವರು ಮಾತನಾಡಿ, ವೆಂಕಟಾಪುರ ಮುಖ್ಯರಸ್ತೆ, 1ನೇ ಅಡ್ಡರಸ್ತೆಯಲ್ಲಿ ಬೀದಿ ದೀಪಗಳು ಹದಗೆಟ್ಟಿದ್ದು, ಬೀದಿ ದೀಪಗಳನ್ನು ಸರಿಪಡಿಸಬೇಕೆಂದು ಸಭೆಯಲ್ಲಿ ಕೋರಿದರು.

ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು
ರಸ್ತೆ ದೀಪಗಳು, ಬೃ.ಬೆಂ.ಮ.ಪಾ.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಗಳನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಸದಸ್ಯ ಕಾರ್ಯದರ್ಶಿ ಮತ್ತು ಸಭೆಯಲ್ಲಿ ಹಾಜರಾಗಿದ್ದ ಎಲ್ಲಾ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

22/09/2022.

(ಶ್ರೀ ಪ್ರದೀಪ್ ಕುಮಾರ್ .ಆರ್)
ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್–173 ಜಕ್ಕಸಂದ್ರ

(ಶ್ರೀ [illegible])
ನೋಡಲ್ ಅಧಿಕಾರಿಗಳು
ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್–173 ಜಕ್ಕಸಂದ್ರ



Scanned by CamScanner

ಜಕ್ಕಸಂದ್ರ ವಾರ್ಡ್ ಸಂ. 191 (173)

ದಿನಾಂಕ: 22/09/2022

ಹಾಜರಿದ್ದ ಅಧಿಕಾರಿಗಳು

Md. Shadab Haider Sr. HI BBMP

Dharaneshkumar. H.B HC-7979 madiwala Traffic P.S.

Kariyappa (TI)

Shivanna. B. C. Nodal officer (Jakkasandra Ward - NO - 173 191)

H.G. Somashekarappa (N.O) 22/9/22

S. Naveen AE BWSSB

Sreenath AE BBMP

C Narasimhulu BBMP (Supervisor) 173

ಹಾಜರಿದ್ದ ನಿವಾಸಿಗಳು

L.V. HENRY

S. Krishna 9900249945

Ponnappa 9886632827

Saraswathamma 9448660567

Jyothi Prabhu 7019118207.

Prema mayura 9663564891

Dharaneshkumar. H.B. 8073203406

Prema 9964787867